**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.10/2021**

ಪಿ.ಡಬ್ಲ್ಯೂ: 1

ಸಿ.ಡಬ್ಲ್ಯೂ: 1

ಸಾಕ್ಷಿದಾರರ ಹೆಸರು : ರೇಣುಕಮ್ಮ

ಗಂಡನ ಹೆಸರು: :ನಾರಾಯಣಸ್ವಾಮಿ

ವಯಸ್ಸು : **33 ವರ್ಷ**

ಉದ್ಯೋಗ : ಗೃಹಿಣಿ

ವಾಸಸ್ಥಳ : ಸಿದ್ದರಹಳ್ಳಿ ಗ್ರಾಮ

**ದಿನಾಂಕ: 06-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: 26-06-2020 ರಂದು ಸಿದ್ದರಹಳ್ಳಿಯಲ್ಲಿರುವ ನಮ್ಮ ಜಮೀನಿನಲ್ಲಿ ನಾನು ಹಾಗೂ ನನ್ನ ಗಂಡ ಕೆಲಸ ಮಾಡುತ್ತಿರುವಾಗ ಆರೋಪಿ ನಮ್ಮ ಜಮೀನಿನಲ್ಲಿ ಅತೀಕ್ರಮ ಪ್ರವೇಶ ಮಾಡಿ ಇದು ನನ್ನ ಜಮೀನು ನೀವು ಕೆಲಸ ಮಾಡಬಾರದೆಂದು ನಮ್ಮನ್ನು ಅವಾಚ್ಯ ಶಬ್ದಗಳಿಂದ ಬೈದು ನನ್ನ ತಲೆ ಕೂದಲನ್ನು ಹಿಡಿದು ಎಳೆದಾಡಿ ಅಲ್ಲೇ ಬಿದ್ದದ್ದ ಒಂದು ಕಲ್ಲನ್ನು ತೆಗೆದುಕೊಂಡು ನನ್ನ ಸೊಂಟಕ್ಕೆ ಹೊಡೆದು ನಮ್ಮ ಮೇಲೆ ಹಲ್ಲೆ ಮಾಡಿರುತ್ತಾರೆ. ನಂತರ ಲಿಂಗದಹಳ್ಳಿಯ ಸರ್ಕಾರಿ ಆಸ್ಪತ್ರೆಯಲ್ಲಿ ನಾನು ಚಿಕಿತ್ಸೆ ಪಡೆದುಕೊಂಡು ಮರುದಿನ ನಮಗೆ ಜಮೀನಿನಲ್ಲಿ ಅಲೂಗೆಡ್ಡೆ ಹಾಕಲು ಅಡ್ಡಗಟ್ಟಿ ಬಿಟ್ಟಿರುವುದಿಲ್ಲ, ನಂತರ ನಾವು ಲಿಂಗದಹಳ್ಳಿ ಪೊಲೀಸ್ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇವೆ. ನಾವು ದೂರು ಕೊಟ್ಟ ದಿನದಂದು ಪೊಲೀಸರು ಕೃತ್ಯ ನಡೆದ ಸ್ಥಳಕ್ಕೆ ಬಂದು ಮಹಜರ್ ಕ್ರಮವನ್ನು ಜರುಗಿಸಿರುತ್ತಾರೆ. ಪೊಲೀಸರು ನನ್ನ ಸಮಕ್ಷಮ ಒಂದು ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರಾಗಿದ್ದು, ಸದರಿ ದಾಖಲೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದರಲ್ಲಿ ಸಾಕ್ಷಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ, ಅವುಗಳನ್ನು ಕ್ರಮವಾಗಿ ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಒಂದು ಕಾಡುಜಾತಿಯ ಕಲ್ಲನ್ನು ನೋಡಿ ಗುರುತಿಸಿದ್ದು, ಅದನ್ನು ಎಂ ಒ -1 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ 29-06-2020 ರಂದು ಬೆಳಿಗ್ಗೆ 11-00 ಗಂಟೆ ಸಮಯದಲ್ಲಿ ಹುಲಿತಿಮ್ಮಾಪುರ ಗ್ರಾಮದ ಜಮೀನಿನಲ್ಲಿ ನಾನು ಮತ್ತು ಚಾಸಾ-5, 6, 7 ರವರೊಂದಿಗೆ ಆಲೂಗೆಡ್ಡೆ ಹಾಕುತ್ತಿರುವಾಗ ಆರೋಪಿಯು ಜಮೀನಿನ ಹತ್ತಿರ ಬಂದು ಇನ್ನೊಮ್ಮೆ ಜಮೀನಿನ ಹತ್ತಿರ ಬಂದರೆ ನಿಮ್ಮನ್ನು ಸಾಯಿಸುವುದಾಗಿ ಕೊಲೆ ಬೆದರಿಕೆ ಹಾಕಿರುತ್ತಾರೆ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

**ಮರುವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

ಸಹಿ/-

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**